



ಅರುಣ ಪಿ. ಭಟ್ಟ

## ವಾರಭವಿಷ್ಯ 28.1.2021ರಿಂದ 3.2.2021ರವರೆಗೆ



**ಮೇಷ**

ನೀವು ದೀರ್ಘಕಾಲದ ಕಾಯಿಲೆಗೆ ಪರಿಹಾರ ಪಡೆಯಬಹುದು. ಹಣ ಸಂಪಾದಿಸಲು ನೀವು ವಿಭಿನ್ನ ವಿಧಾನಗಳನ್ನು ಅಳವಡಿಸಿಕೊಳ್ಳಬಹುದು. ಕುಟುಂಬದ ಸದಸ್ಯರೊಂದಿಗಿನ ಸಂಬಂಧಗಳು ಸುಧಾರಿಸುತ್ತವೆ. ನಿಮ್ಮ ಆದಾಯದಲ್ಲಿ ಹೆಚ್ಚಳವಾಗಬಹುದು ಮತ್ತು ಸಮಾಜದಲ್ಲಿ ನಿಮ್ಮ ಸ್ಥಾನವು ಸುಧಾರಿಸಬಹುದು. ಪ್ರತಿ ಸವಾಲನ್ನು ಎದುರಿಸಲು ನೀವು ಸಿದ್ಧರಾಗಿರುತ್ತೀರಿ. ಶುಭದಿನ 2. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣದ ಕಡೆ ಹೆಚ್ಚಿನ ಗಮನ ನೀಡಬೇಕು. ಉತ್ತಮ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ಶುಭದಿನ 1. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.



**ಮಿಥುನ**

ಮಿಥುನ..ನಿಮ್ಮ ವೈಯಕ್ತಿಕ ವರ್ಚಸ್ಸು, ಸಾಮಾಜಿಕವಾದ ಗೌರವದ ನೆರವಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಬಹಳ ಕಾಲದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಶ್ರಮದ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಆಹಾರ ನೀರು ಸೇವಿಸುವಾಗ ಸ್ವಚ್ಛತೆ ಬಗ್ಗೆ ಹೆಚ್ಚು ಗಮನ ನೀಡಿ. ಶುಭದಿನ 30. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.



**ಕಟಕ**

ನಿಮ್ಮ ಆದಾಯದಲ್ಲಿ ಹೆಚ್ಚಳ ಕಾಣಿಸಿಕೊಳ್ಳಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು, ಕೀರ್ತಿ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು ಎದುರಾಗಿ, ಗೊಂದಲಕ್ಕೆ ಒಳಗಾಗುತ್ತೀರಿ. ಶುಭದಿನ 2. ವಿಷ್ಣುಸಹಸ್ರನಾಮ ಓದಿರಿ.



**ಸಿಂಹ**

ಉದ್ಯೋಗ ನಿಮಿತ್ತವಾಗಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಆಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರ ಸೋದರಿಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಂತಾನ ನಿರೀಕ್ಷೆಯ ದಂಪತಿಗೆ ಶುಭ ಸುದ್ದಿ. ಶುಭದಿನ 29. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.



**ಕನ್ಯಾ**

ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸದಲ್ಲಿ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಶುಭದಿನ 3. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.



**ತುಲಾ**

ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 31. ಆದಿತ್ಯ ಹೃದಯ ಪಠಿಸಿರಿ.



**ವೃಶ್ಚಿಕ**

ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ 2. ಚಂಡಿ ಪಾರಾಯಣ ಮಾಡಿರಿ.



**ಧನಸ್ಸು**

ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಪ್ರಮುಖ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಶುಭದಿನ 2. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.



**ಮಕರ**

ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ಶುಭದಿನ 1. ವಿಷ್ಣು ಸಹಸ್ರನಾಮ ಪಠಿಸಿರಿ.



**ಕುಂಭ**

ಆದಾಯದಲ್ಲಿ ಹೆಚ್ಚಳ ಆಗುವಾಗುತ್ತದೆ. ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಸಂಗಾತಿಗೆ ಉಡುಗೊರೆಗಳನ್ನು ನೀಡುತ್ತೀರಿ. ಶುಭದಿನ 2. ಶಿವಕವಚ ಪಠಣ ಮಾಡಿರಿ.



**ಮೀನ**

ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 28. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.